ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1076
ಸದಸ್ಯರ ಹೆಸರು : ಶ್ರೀ ಅರವಿಂದ್ ಕುಮಾರ್ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ : 21.09.2021.
ಉತ್ತರಿಸುವವರು : ಪೌರಾಡಳಿತ, ಸಣ್ಣ ಕೈಗಾರಿಕೆ ಹಾಗೂ ಸಾರ್ವಜನಿಕ ವಲಯ ಉದ್ದಿಮೆಗಳ ಸಚಿವರು.

ಕ್ರ.ಸಂ.	ಪ್ರಶ್ನೆ	ಉತ್ತರ
ಅ)	ಜಿಲ್ಲೆಯಲ್ಲಿ ಕಾಂಪಿಟ್ ವಿತ್ ಚೈನಾ ಯೋಜನೆಯಡಿಯಲ್ಲಿ ಸಣ್ಣ ಕೈಗಾರಿಕೆ ಇಲಾಖೆ ವತಿಯಿಂದ ಇಲ್ಲಿಯವರೆಗೆ ಎಷ್ಟು ಜನರು ಈ ಯೋಜನೆಯ ಉಪಯೋಗ ಪಡೆದುಕೊಂಡಿದ್ದಾರೆ;	"ಕಾಂಪೀಟ್ ವಿತ್ ಚೈನಾ" ಯೋಜನೆಯಡಿ ಬೀದರ್ ಜಿಲ್ಲೆಯಲ್ಲಿ ಕೃಷಿ ಉಪಕರಣಗಳ ಉತ್ಪಾದನಾ ಕ್ಲಸ್ಟರ್ ಸ್ಥಾಪಿಸಲಾಗುತ್ತಿದೆ. ಈ ನಿಟ್ಟಿನಲ್ಲಿ ಕೃಷಿ ಉಪಕರಣಗಳ ತಯಾರಿಕೆಯಲ್ಲಿ ದೇಶದಲ್ಲಿ ಮುಂಚೂಣಿಯಲ್ಲಿರುವ ಕೈಗಾರಿಕೋದ್ಯಮಿಗಳನ್ನೊಳಗೊಂಡ "ವಿಶನ್ ಗ್ರೂಪ್" ಸ್ಥಾಪಿಸಲಾಗಿದ್ದು ಈ ವಿಶನ್ ಗ್ರೂಪ್‌ನ ಮಾರ್ಗದರ್ಶನದಂತೆ ಸದರಿ ಕ್ಲಸ್ಟರ್‌ನ್ನು ಸ್ಥಾಪಿಸಲಾಗುತ್ತಿದೆ. ಬೀದರ್‌ನ ಕೋಳಾರ್ ಕೈಗಾರಿಕಾ ಪ್ರದೇಶದಲ್ಲಿ ಲಭ್ಯವಿರುವ 40 ಎಕರೆ ಭೂಮಿಯನ್ನು ಸದರಿ ಕ್ಲಸ್ಟರ್ ಸ್ಥಾಪಿಸಲು ಮೀಸಲಿರಿಸಲಾಗಿದೆ. ಪ್ರಸ್ತುತ ಸದರಿ ಕ್ಲಸ್ಟರ್ ಅಭಿವೃದ್ಧಿ ಹಂತದಲ್ಲಿದ್ದು ಹಾಲಿ ಯಾವುದೇ ಕೈಗಾರಿಕಾ ಯೋಜನೆಗಳು ಸ್ಥಾಪನೆಯಾಗಿರುವುದಿಲ್ಲ.
ಆ)	ಕೇಂದ್ರ ಸರ್ಕಾರ ಪ್ರಧಾನ ಮಂತ್ರಿಗಳ ಉದ್ಯೋಗ ಸೃಜನ ಯೋಜನೆಯಡಿಯಲ್ಲಿ ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಎಷ್ಟು ಕೈಗಾರಿಕೆಗಳನ್ನು ಸ್ಥಾಪಿಸಲಾಗಿದೆ;	ಕಳೆದ ಮೂರು ವರ್ಷಗಳಲ್ಲಿ ಕೇಂದ್ರ ಸರ್ಕಾರದ ಪ್ರಧಾನ ಮಂತ್ರಿಗಳ ಉದ್ಯೋಗ ಸೃಜನ ಯೋಜನೆಯಡಿಯಲ್ಲಿ ಬೀದರ್ ಜಿಲ್ಲೆಯ ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಸ್ಥಾಪಿಸಲಾದ ಘಟಕಗಳ ವಿವರಗಳು ಈ ಕೆಳಗಿನಂತಿವೆ.
ಇ)	ಕಳೆದ 5 ವರ್ಷಗಳಿಂದ ಕರ್ನಾಟಕ ರಾಜ್ಯ ಜಿಲ್ಲಾ ಹಣಕಾಸು ಸಂಸ್ಥೆಯ ಮೂಲಕ ಸೂಕ್ಷ್ಮ ಮತ್ತು ಸಣ್ಣ ಕೈಗಾರಿಕೆಗಳಿಗೆ ಎಷ್ಟು ಸಹಾಯ ಧನ ನೀಡಲಾಗಿದೆ? ನೀಡಿದ್ದಲ್ಲಿ, ವಿವರ ನೀಡುವುದು.	ಕಳೆದ 5 ವರ್ಷಗಳಿಂದ ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯ ಮೂಲಕ ಸೂಕ್ಷ್ಮ ಮತ್ತು ಸಣ್ಣ ಕೈಗಾರಿಕೆಗಳಿಗೆ ನೀಡಲಾಗಿರುವ ಸಹಾಯಧನದ ವಿವರಗಳು ಈ ಕೆಳಗಿನಂತಿವೆ.

(ಆ) ಉತ್ತರದ ಕೋಷ್ಟಕ:

ಅವಧಿ	ಗ್ರಾಮೀಣ	ನಗರ	ಒಟ್ಟು
2018-19	48	24	72
2019-20	53	23	76
2020-21	41	19	60

(ಇ) ಉತ್ತರದ ಕೋಷ್ಟಕ:

ಅವಧಿ	6% ಬಡ್ಡಿ ಸಹಾಯಧನ		ಮೊದಲನೇ ಪೀಳಿಗೆ ಉದ್ದಿಮೆದಾರಿಗೆ ಬಡ್ಡಿ ಸಹಾಯಧನ	
	ಘಟಕಗಳು	ಸಹಾಯಧನ ರೂ.ಲಕ್ಷಗಳಲ್ಲಿ	ಘಟಕಗಳು	ಸಹಾಯಧನ ರೂ.ಲಕ್ಷಗಳಲ್ಲಿ
2016-17	-	-	9	11.31
2017-18	-	-	9	8.05
2018-19	-	-	11	6.46
2019-20	5	8.38	9	6.59
2020-21	12	59.77	7	3.85

(ಎನ್. ನಾಗರಾಜು (ಎಂ.ಟಿ.ಬಿ))
ಪೌರಾಡಳಿತ ಮತ್ತು ಸಣ್ಣ ಕೈಗಾರಿಕೆ
ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು.